# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 618 (589) |
| ಉತ್ತರಿಸುವ ದಿನಾಂಕ | 12-03-2025 |
| ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು | ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | 2015, ಜನವರಿ 9 ರ ಬಳಿಕ ಬೆಂಗಳೂರು ನಗರ ಜಿಲ್ಲೆಯ ನೀಲಸಂದ್ರ ಗ್ರಾಮದ ಸರ್ವೆ ನಂ.79 ರಲ್ಲಿ 15 ಎಕರೆ 12 ಗುಂಟೆ ಜಮೀನಿಗೆ ಸಂಬಂಧಿಸಿದಂತೆ ಉಪ ನೋಂದಣಾಧಿಕಾರಿಗಳ ಕಛೇರಿಯಲ್ಲಿ ಎಷ್ಟು ಮಾರಾಟ ಮತ್ತು ಖರೀದಿ ಪ್ರಕ್ರಿಯೆಗಳು ದಾಖಲಾಗಿವೆ; (ನೋಂದಾಯಿತ ಮಾರಾಟ ಹಾಗೂ ಖರೀದಿ ಮಾಡಿದವರ ವಿವರದೊಂದಿಗೆ ನೋಂದಣಿ ದಿನಾಂಕ ಸಹಿತವಾಗಿ ಮಾಹಿತಿ ನೀಡುವುದು) | 2015 ಜನವರಿ 9ರ ಬಳಿಕ ಬೆಂಗಳೂರು ನಗರ ಜಿಲ್ಲೆಯ ನೀಲಸಂದ್ರ ಗ್ರಾಮದ ಸರ್ವೆ ನಂ.79 ರಲ್ಲಿ 15 ಎಕರೆ 12 ಗುಂಟೆ ಜಮೀನಿಗೆ ಸಂಬಂಧಿಸಿದಂತೆ ವಿಭಾಗ ಪತ್ರ ದಸ್ತಾವೇಜು ಸಂಖ್ಯೆ: 00540-22/23, ದಿನಾಂಕ:27-04-2022 ರಂದು ಬಿ.ಟಿ.ಎಂ ಲೇಔಟ್ ಉಪನೋಂದಣಿ ಕಛೇರಿಯಲ್ಲಿ ನೋಂದಣಿಯಾಗಿರುತ್ತದೆ. ಸದರಿ ಸಮಯದಲ್ಲಿ ಶ್ರೀ ಭಾಸ್ಕರ್ .ಎಸ್. ಚೌರ ಇವರು ಉಪ ನೋಂದಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿರುತ್ತಾರೆ. |
| ಆ | 2015 ಜನವರಿ 9ರ ಬಳಿಕ ಬೆಂಗಳೂರು ನಗರ ಜಿಲ್ಲೆಯ 'ನೀಲಸಂದ್ರ ಗ್ರಾಮದ ಸರ್ವೆ ನಂ.79 ರಲ್ಲಿ 15 ಎಕರೆ 12 ಗುಂಟೆ ಜಮೀನಿಗೆ ಸಂಬಂಧಿಸಿದಂತೆ ಉಪ ನೋಂದಣಾಧಿಕಾರಿಗಳ ಕಛೇರಿಯಲ್ಲಿ ಮಾರಾಟ ಮತ್ತು ಖರೀದಿ ನೋಂದಣಿ ಪ್ರಕ್ರಿಯೆಗಳು ನಡೆಯುತ್ತಿರುವ ಸಮಯದಲ್ಲಿ ಸದರಿ ಕಛೇರಿಗಳಲ್ಲಿ ಉಪ ನೋಂದಣಾಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸಿದ ಅಧಿಕಾರಿಗಳು ಯಾರು? (ಹೆಸರಿನೊಂದಿಗೆ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳದ ಮಾಹಿತಿ ನೀಡುವುದು) | ಸದರಿ ನೌಕರರ ವಿರುದ್ಧದ ಭ್ರಷ್ಟಾಚಾರ ಆರೋಪವು ಸಾಬೀತಾದ ಕಾರಣ ಸದರಿಯವರನ್ನು ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು ದಿನಾಂಕ:02-09-2024ರ ಆದೇಶದಲ್ಲಿ ಕರ್ನಾಟಕ ನಾಗರೀಕ ಸೇವಾ (ಸಿ.ಸಿ.ಎ) ನಿಯಮಾವಳಿಗಳು 1957ರ ನಿಯಮ-8(viii) ರನ್ವಯ ಸರ್ಕಾರಿ ಸೇವೆಯಿಂದ ವಜಾಗೊಳಿಸುವ ದಂಡನೆಯನ್ನು ವಿಧಿಸಿರುತ್ತಾರೆ. |

**ಕಂಇ/80/ಎಂಎನ್ಎಸ್ಎ/2025**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು